**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 29/2023**

**ಚಾ.ಸಾ. :- 17**
**ಪ್ರಾ.ಸಾ. :- 02**

| | | |
|---|---|---|
| ಹೆಸರು | : | ದೊರೆಸ್ವಾಮಿ |
| ತಂದೆಯ ಹೆಸರು | : | ಅಣ್ಣಯ್ಯ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ಹೆಚ್.ಸಿ., ಕ್ಯಾತನಹಳ್ಳಿ ಪೊಲೀಸ್ ಠಾಣೆ |
| ವಾಸಸ್ಥಳ | : | ಕೆ.ಆರ್.ಸಾಗರ. |

**ಪ್ರಮಾಣೀಕರಿಸಲಾದ ದಿನಾಂಕಃ- 12.01.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2022 ರಿಂದ 2023 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 28.03.2023 ರಂದು ನಾನು ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾಗ ಚಾ.ಸಾ-1 ರವರು ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಪ್ರಕರಣವನ್ನು ದಾಖಲು ಮಾಡಿಕೊಂಡು, ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗ ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-14 ಎಂದು ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-18 ರವರು ಪಡೆದುಕೊಂಡಿರುತ್ತಾರೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ದಿನಾಂಕಃ 27.03.2023 ರಂದು ನಾನು ಠಾಣಾಧಿಕಾರಿಯಾಗಿರಲಿಲ್ಲ. ಆ ದಿನ ಯಾರು ಠಾಣಾಧಿಕಾರಿಯಾಗಿದ್ದರು ಎಂದು ಹೇಳಲಾಗುವುದಿಲ್ಲ. ದೂರು ನೀಡಲು ಬಂದಾಗ ಅವರು ಹಿಂದಿನ ದಿನವೇ ಪೊಲೀಸರಿಗೆ ಮಾಹಿತಿ ಕೊಟ್ಟಿದ್ದರೋ, ಇಲ್ಲವೋ ಎಂದು ವಿಚಾರಿಸಿಲ್ಲ. ದಿನಾಂಕಃ 28.03.2023 ರಂದು ಅಪಘಾತದ ಬಗ್ಗೆ ಬೇರೆಯವರು ನಮಗೆ ಮಾಹಿತಿ ಕೊಟ್ಟಿಲ್ಲ. ದೂರುದಾರರು ಅವರಿಗೆ ಗಾಯಗಳಾಗಿರುತ್ತವೆ ಎಂದು ದೂರು ಕೊಟ್ಟಿಲ್ಲ. ಆರೋಪಿ ತಪ್ಪಿನಿಂದ ಅಪಘಾತವಾಗದೇ ಇದ್ದರೂ ದೂರುದಾರರ ಕುಟುಂಬಕ್ಕೆ ಸಹಾಯ ಮಾಡಲು ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

ತಡವಾಗಿ ದೂರು ಕೊಟ್ಟಿರುವ ಬಗ್ಗೆ ಕಾರಣವನ್ನು ನಮೂದು ಮಾಡಿರುವುದಿಲ್ಲ ಎಂದರೆ ಸರಿ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :-</u> ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**